# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1283 |
| ಸದಸ್ಯರ ಹೆಸರು | ಶ್ರೀ. ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.03.2025 |
| ಉತ್ತರಿಸುವ ಸಚಿವರು | ಲೋಕೋಪಯೋಗಿ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಜ್ಯವು ಹೊಂದಿರುವ ರಸ್ತೆಗಳ ಒಟ್ಟು ವಿಸ್ತೀರ್ಣವೆಷ್ಟು: ಅದರಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮಟ್ಟದ ಹೆದ್ದಾರಿಗಳು ಎಷ್ಟು ಕಿ.ಮೀ ಇವೆ: (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿರುವ 8224 ಉದ್ದದ ರಾಷ್ಟ್ರೀಯ ಹೆದ್ದಾರಿ, 27952.00 ಕಿ.ಮೀ. ಉದ್ದದ ರಾಜ್ಯ ಹೆದ್ದಾರಿ ಹಾಗೂ 56115.00 ಕಿ.ಮೀ. ಉದ್ದದ ಜಿಲ್ಲಾ ಮುಖ್ಯ ರಸ್ತೆಗಳನ್ನು ಒಳಗೊಂಡಂತೆ ಒಟ್ಟು – 92291 ಕಿ.ಮೀ. ಉದ್ದದ ರಸ್ತೆ ಸಂಪರ್ಕ ಜಾಲವನ್ನು ಹೊಂದಿದೆ. ಜಿಲ್ಲಾವಾರು ಉದ್ದದ ವಿವರಗಳನ್ನು ಅನುಬಂಧ–1 ರಲ್ಲಿ ನೀಡಿದೆ. |
| ಆ | ರಾಜ್ಯದ ಎಲ್ಲಾ ರಸ್ತೆಗಳು ಹೊಂಡಗಳಿಂದ ಕೂಡಿದ್ದು, ಗ್ರಾಮೀಣ ಭಾಗದಲ್ಲಿನ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿರುವುದರಿಂದ ಇದನ್ನು ಸರಿಪಡಿಸಲು ತೆಗೆದುಕೊಂಡ ಕ್ರಮವೇನು: | ಲೋಕೋಪಯೋಗಿ ಇಲಾಖೆ, ದಕ್ಷಿಣ ವಲಯ ವ್ಯಾಪ್ತಿಯಲ್ಲಿ ರಾಜ್ಯ ಹೆದ್ದಾರಿ ರಸ್ತೆಗಳಿಗೆ 2024–25ನೇ ಸಾಲಿನಲ್ಲಿ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ (capital heads) ಒಟ್ಟು 161.61 ಕೋಟಿ ಅನುದಾನ ಒದಗಿಸಿದ್ದು, ಅದರಲ್ಲಿ 95.45ಕಿ.ಮೀ ಉದ್ದದ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಮುಂದುವರೆದು 2024–25 ನೇ ಸಾಲಿನ ವಾರ್ಷಿಕ ನಿರ್ವಹಣೆ ಅಡಿ ರಾಜ್ಯ ಹೆದ್ದಾರಿ ಒಟ್ಟು 3605.69 ಕಿ.ಮೀ ರಸ್ತೆಯನ್ನು 44.91 ಕೋಟಿ ಮೊತ್ತದಲ್ಲಿ ನಿರ್ವಹಣೆ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಲಾಗಿರುತ್ತದೆ. ಅದೇ ರೀತಿ ಜಿಲ್ಲಾ ಮುಖ್ಯ ರಸ್ತೆಗಳಿಗೆ 2024–25 ನೇ ಸಾಲಿನ ಸಾಲಿನಲ್ಲಿ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ (capital heads) ಒಟ್ಟು 745.31 ಕೋಟಿ ಅನುದಾನ ಒದಗಿಸಿದ್ದು, ಅದರಲ್ಲಿ 624.31 ಕಿ.ಮೀ ಉದ್ದದ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಮುಂದುವರೆದು 2024–25 ನೇ ಸಾಲಿನ ವಾರ್ಷಿಕ ನಿರ್ವಹಣೆ ಅಡಿ ಜಿಲ್ಲಾ ಮುಖ್ಯ ರಸ್ತೆಯ ಒಟ್ಟು 11676.79 ಕಿ.ಮೀ ರಸ್ತೆಯನ್ನು ರೂ.71.05 ಕೋಟಿ ಮೊತ್ತದಲ್ಲಿ ನಿರ್ವಹಣೆ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಲಾಗಿರುತ್ತದೆ.<br><br>ಉತ್ತರ ವಲಯ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿ & ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳು ಹಾಗೂ ಅವುಗಳನ್ನು ಮುಚ್ಚಲು 2022–23 & 2023–24ನೇ ಸಾಲಿನಲ್ಲಿ ಸರ್ಕಾರವು ವೆಚ್ಚ ಮಾಡಿದ ಅನುದಾನದ ವಿವರಗಳನ್ನು ಅನುಬಂಧ–2 ರಲ್ಲಿ ನೀಡಿದೆ.<br><br>ಈಶಾನ್ಯ & ಕೇಂದ್ರ ವಲಯ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿ & ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಪ್ರತಿ ವರ್ಷ ವಾರ್ಷಿಕ ನಿರ್ವಹಣೆಯಡಿ ಒದಗಿಸಲಾಗುವ ಅನುದಾನದಲ್ಲಿ ದುರಸ್ಥಿ ಕಾಮಗಾರಿಯನ್ನು ಕೈಗೊಂಡು ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ. |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಇ | ಕಳೆದ 2 ವರ್ಷದಲ್ಲಿ ರಸ್ತೆಯ ಹೊಂಡಗಳನ್ನು ಮುಚ್ಚಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ? (ರಸ್ತೆ ಹೊಂಡಗಳನ್ನು ಮುಚ್ಚಲು ಗುತ್ತಿಗೆ ಪಡೆದಿರುವ ಗುತ್ತಿಗೆದಾರರ ಹೆಸರಿನೊಂದಿಗೆ ಜಿಲ್ಲಾವಾರು ವಿವರ ನೀಡುವುದು) | ಕಳೆದ 2 ವರ್ಷದಲ್ಲಿ ರಸ್ತೆಯ ಹೊಂಡಗಳನ್ನು ಮುಚ್ಚಲು ಮಾಡಲಾಗಿರುವ ವೆಚ್ಚದ (ರಸ್ತೆ ಹೊಂಡಗಳನ್ನು ಮುಚ್ಚಲು ಗುತ್ತಿಗೆ ಪಡೆದಿರುವ ಗುತ್ತಿಗೆದಾರರ ಹೆಸರಿನೊಂದಿಗೆ ಜಿಲ್ಲಾವಾರು ವಿವರ) ವಿವರಗಳನ್ನು ಅನುಬಂಧ–3ರಲ್ಲಿ ನೀಡಿದೆ. |

ಲೋಇ 89 ಸಿಕ್ಯೂಎನ್ 2025(ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು